All India Radio: Bangalore

Regional Bulletin In Kannada

03.01.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕೇಂದ್ರ ಬಜೆಟ್‌ನಲ್ಲಿ ಕರ್ನಾಟಕದ ರೈಲ್ವೆ ಯೋಜನೆಗಳಿಗೆ ೭ ಸಾವಿರದ ೫೬೪ ಕೋಟಿ ರೂಪಾಯಿ ಅನುದಾನ ಮೀಸಲು- ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

- ರಾಜ್ಯದ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ೧೦ ಲಕ್ಷ ಕೋಟಿಗೂ ಹೆಚ್ಚು ಬಂಡವಾಳ ನಿರೀಕ್ಷೆ

- ಬೆಂಗಳೂರಿನಲ್ಲಿ ಮತ್ತೊಂದು ವಿಮಾನ ನಿಲ್ದಾಣಕ್ಕೆ ರಾಜ್ಯಸಭೆಯಲ್ಲಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮನವಿ

- ರಾಜ್ಯದ ಹಿತಾಸಕ್ತಿ ಕಾಪಾಡುವಲ್ಲಿ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ವಿಫಲ- ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಸಮಾಧಾನ

- ೩೮ನೇ ರಾಷ್ಟ್ರೀಯ ಕ್ರೀಡಾಕೂಟ; ರಾಜ್ಯದ ಜೋನಾಥನ್ ಆಂಟೊನಿಗೆ ೧೦ ಮೀಟರ್ ಏರ್ ಪಿಸ್ತೂಲ್‌ನಲ್ಲಿ ಚಿನ್ನ- ಪದಕ ಪಟ್ಟಿಯಲ್ಲಿ ಕರ್ನಾಟಕಕ್ಕೆ ಎರಡನೇ ಸ್ಥಾನ

***************

ಕರ್ನಾಟಕದ ರೈಲ್ವೆ ಯೋಜನೆಗಳಿಗೆ ಈ ಬಾರಿಯ ಬಜೆಟ್‌ನಲ್ಲಿ ೭ ಸಾವಿರದ ೫೬೪ ಕೋಟಿ ರೂಪಾಯಿ ಘೋಷಿಸಲಾಗಿದೆ. ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಕರ್ನಾಟಕಕ್ಕೆ ನೀಡಿರುವ ಅನುದಾನ ಕುರಿತಂತೆ ಕೇಂದ್ರ ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್, ನವದೆಹಲಿಯಿಂದ ವೀಡಿಯೋ ಕಾನ್ಫರೆನ್ಸ್ ಮೂಲಕ ಇಂದು ಮಾಹಿತಿ ನೀಡಿದರು. ಇದು ಯುಪಿಎ ಸರ್ಕಾರದ ಅವಧಿಯಲ್ಲಿ ನೀಡಿರುವ ಅನುದಾನಕ್ಕಿಂತ ೯ ಪಟ್ಟು ಹೆಚ್ಚು ಎಂದು ತಿಳಿಸಿದರು.

ಇದೇ ವೇಳೆ ವಿವಿಧ ಅನುದಾನ, ಹೊಸ ವಂದೇಭಾರತ್ ರೈಲುಗಳ ಬಗ್ಗೆ ಮಾಹಿತಿ ಹಾಗೂ ರೈಲು ಮಾರ್ಗ ವಿಸ್ತರಣೆ ಕುರಿತು ವಿವರಿಸಿದರು.

ಕರ್ನಾಟಕದಲ್ಲಿ ಶೇಕಡ ೯೭ ರಷ್ಟು ರೈಲ್ವೇ ವಿದ್ಯುಧೀಕರಣವನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆ. ೧ ಸಾವಿರದ ೬೫೨ ರೈಲ್ವೆ ಮಾರ್ಗಗಳಿಗೆ ಅನುಮತಿ ನೀಡಲಾಗಿದೆ. ೬೪ ರೈಲ್ವೆ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಲು ನಿರ್ಧರಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಇದೇ ವೇಳೆ ಕರ್ನಾಟಕದಾದ್ಯಂತ ೧೦ ವಂದೇ ಭಾರತ್ ರೈಲು ಸಂಚರಿಸುತ್ತಿದೆ ಎಂದು ಅಶ್ವಿನಿ ವೈಷ್ಣವ್ ಸ್ಪಷ್ಟಪಡಿಸಿದರು.

ಧ್ವನಿ: ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೨೦೨೫-೨೬ರ ಹಣಕಾಸು ವರ್ಷದಲ್ಲಿ ೨ ಲಕ್ಷ ೬೫ ಸಾವಿರದ ೨೦೦ ಕೋಟಿ ರೂಪಾಯಿ ಮಂಜೂರು ಮಾಡಲಾಗಿದ್ದು, ೩೨ ಸಾವಿರದ ೨೩೫ ಕೊಟಿ  ಬಜೆಟ್ ನೊಂದಿಗೆ ಹೊಸ ರೈಲು ಮಾರ್ಗಗಳನ್ನು ಅತ್ಯಂತ ವೇಗವಾಗಿ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದು ಹೇಳಿದರು.

ಮುಂದಿನ ಐದು ವರ್ಷಗಳಲ್ಲಿ ಪ್ರಯಾಣಿಕರ ಸುರಕ್ಷತೆಯನ್ನು ಹೆಚ್ಚಿಸುವ ಉದ್ದೇಶದಿಂದ ಸಾಂಪ್ರದಾಯಿಕ ಐಸಿಎಫ್ ಭೋಗಿಗಳನ್ನು ಎಲ್ ಎಚ್ ಬಿ ಭೋಗಿಗಳನ್ನಾಗಿ ಪರಿವರ್ತಿಸಲಾಗುವುದು.

ರಸ್ತೆ ಮೇಲ್ ಸೇತುವೆ ನಿರ್ಮಾಣಕ್ಕೆ ೭ ಸಾವಿರ ಕೋಟಿ ರೂಪಾಯಿ ಬಜೆಟ್ ಮೀಸಲಿಡಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

ಇದೇ ವೇಳೆ ಮಾತನಾಡಿದ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಅಮಿತೇಶ್ ಕುಮಾರ್ ಸಿನ್ಹ, ರಾಜ್ಯಕ್ಕೆ ನೀಡಿರುವ ರೈಲ್ವೆ ಅನುದಾನದ ಬಗ್ಗೆ ಆಕಾಶವಾಣಿಗೆ ಮಾಹಿತಿ ನೀಡಿದರು.

ಧ್ವನಿ: ಅಮಿತೇಶ್ ಕುಮಾರ್

***************

ಇದೇ ೧೧ ರಿಂದ ೧೪ರವರೆಗೆ ನಡೆಯುವ "ಇನ್ವೆಸ್ಟ್ ಕರ್ನಾಟಕ ೨೦೨೫" ಜಾಗತಿಕ ಹೂಡಿಕೆದಾರರ ಸಮಾವೇಶದ ಮೂಲಕ ರಾಜ್ಯದಲ್ಲಿ ಸುಮಾರು ೧೦ಲಕ್ಷ ಕೋಟಿಗೂ ಹೆಚ್ಚು ಬಂಡವಾಳ ಹೂಡಿಕೆಯಾಗಬಹುದು ಎಂದು ಅಂದಾಜು ಮಾಡಲಾಗಿದೆ. ಇಲ್ಲಿಯವರೆಗೂ ಸುಮಾರು ೭ ಲಕ್ಷ ಕೋಟಿ ಬಂಡವಾಳದ ಹರಿವನ್ನು ದೃಢೀಕರಿಸಲಾಗಿದೆ" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

"ಇನ್ವೆಸ್ಟ್ ಕರ್ನಾಟಕ ೨೦೨೫"ರ ಕುರಿತು ವಿಧಾನಸೌಧದಲ್ಲಿ ಇಂದು ನಡೆದ ಪೂರ್ವಭಾವಿ ಸಿದ್ಧತಾ ಪರಿಶೀಲನೆ ಸಭೆ ನಂತರ ಮಾತನಾಡಿದ ಅವರು, "೬೦ ಕ್ಕೂ ಹೆಚ್ಚು ಗಣ್ಯ ಪ್ರತಿನಿಧಿಗಳು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ೨ ಸಾವಿರದಷ್ಟು ಹೂಡಿಕೆದಾರರು ಸಮಾವೇಶದಲ್ಲಿ ಭಾಗವಹಿಸಲು ನೋಂದಣಿ ಮಾಡಿಕೊಂಡಿದ್ದಾರೆ. ೧೮ ರಾಷ್ಟ್ರಗಳು ಸಮಾವೇಶದಲ್ಲಿ ಭಾಗವಹಿಸಲಿದ್ದು, ೯ ದೇಶಗಳು ತಮ್ಮ ಪೆವಿಲಿಯನ್ ಗಳನ್ನು ತೆರಯಲು ಮುಂದೆ ಬಂದಿದ್ದಾರೆ. ೧೦ ದೇಶಗಳ ಉನ್ನತ ಮಟ್ಟದ ಕೈಗಾರಿಕಾ ವಲಯದ ನಾಯಕರು ತಾಂತ್ರಿಕ ವಲಯದ ಗೋಷ್ಠಿಗಳಲ್ಲಿ ಭಾಗವಹಿಸಲಿದ್ದಾರೆ" ಎಂದು ಮಾಹಿತಿ ನೀಡಿದ್ದಾರೆ.

"ಕರ್ನಾಟಕ ರಾಜ್ಯ ನೂತನ ಕೈಗಾರಿಕಾ ನೀತಿ ೨೦೨೫-೩೦ ಅನ್ನು ಈ ಸಮಾವೇಶದಲ್ಲಿ ಘೋಷಣೆ ಮಾಡಲು ನಿರ್ಧರಿಸಲಾಗಿದೆ.

“ಸುಮಾರು ೩೦ ಕ್ಕೂ ನವೋದ್ಯಮಗಳು ಕರ್ನಾಟಕ ಬಂಡವಾಳ ಹೂಡಿಕೆ ಸಮಾವೇಶದಲ್ಲಿ ಭಾಗವಹಿಸುತ್ತಿವೆ. ಸುಮಾರು ೧ ಸಾವಿರಕ್ಕೂ ಹೆಚ್ಚು ನವೋದ್ಯಮಗಳಿಂದ ಪ್ರದರ್ಶನಕ್ಕೆ ಅರ್ಜಿಗಳು ಬಂದಿದ್ದವು. ಇವರಲ್ಲಿ ವಿನೂತನ ಚಿಂತನೆಗಳನ್ನು ಹೊಂದಿರುವ ೪೫ ನವೋದ್ಯಮಗಳಿಗೆ ಅವಕಾಶ ಕಲ್ಪಿಸಲಾಗಿದೆ” ಎಂದರು.

ಧ್ವನಿ: ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

***************

ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ಸಂಖ್ಯೆ ಹಾಗೂ ವಿಮಾನ ದಟ್ಟಣೆ ದಿನೇ ದಿನೇ ಹೆಚ್ಚಾಗುತ್ತಿದ್ದು, ಕರ್ನಾಟಕಕ್ಕೆ ಮತ್ತೊಂದು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಸೂಕ್ತ ಪರಿಹಾರ ರೂಪಿಸಬೇಕು ಎಂದು ರಾಜ್ಯಸಭೆಯಲ್ಲಿಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಪ್ರಶ್ನೋತ್ತರ ಅವಧಿಯಲ್ಲಿ ಮನವಿ ಮಾಡಿದ್ದಾರೆ.

ಇದಕ್ಕೆ ಉತ್ತರಿಸಿದ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು, ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ದೇಶದ ಅತ್ಯಂತ ದಟ್ಟಣೆಯ ವಿಮಾನ ನಿಲ್ದಾಣವಾಗಿದೆ. ರಾಜ್ಯ ಸರ್ಕಾರ ಮತ್ತೊಂದು ವಿಮಾನ ನಿಲ್ದಾಣ ಸ್ಥಾಪಿಸಲು ಮುಂದಾಗಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಈ ಸಂಬಂಧ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಿದರೆ, ಕೇಂದ್ರ ಸರ್ಕಾರ ಅನಮೋದನೆ ನೀಡಲಿದೆ ಎಂದು ಉತ್ತರಿಸಿದರು.

***************

ಕರ್ನಾಟಕದ ಪ್ರತಿನಿಧಿಯಾಗಿ ರಾಜ್ಯದ ಹಿತಾಸಕ್ತಿಗಳನ್ನು ಕಾಪಾಡುವಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ವಿಫುಲರಾಗಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಕ್ಕೆ ಕೇಂದ್ರ ವಿತ್ತ ಸಚಿವರು ನೀಡಿದ ಕೊಡುಗೆಗಳೇನು ಎಂದು ಪ್ರಶ್ನಿಸಿದ್ದಾರೆ. ರಾಜ್ಯದ ಆರ್ಥಿಕ ಸ್ಥಿತಿಯ ಬಗ್ಗೆ ಅವರು ನೀಡಿದ ಹೇಳಿಕೆ ಸ್ವೀಕಾರರ್ಹವಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

***************

ಉತ್ತರಾಖಂಡದಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಕರ್ನಾಟಕದ ೧೫ ವರ್ಷದ ಜೋನಾಥನ್ ಗವಿನ್ ಆಂಟೊನಿ ಪುರುಷರ ೧೦ ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದಿದ್ದಾರೆ. ಹಿರಿಯ ಶೂಟರ್ ಹಾಗೂ ಒಲಿಂಪಿಕ್ ಪದಕ ವಿಜೇತರನ್ನು ಹಿಂದಿಕ್ಕಿ ಈ ಸಾಧನೆ ಮಾಡಿದ್ದಾರೆ.

ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಸರ್ವಿಸಸ್ ೧೭ ಚಿನ್ನ, ೧೦ ಬೆಳ್ಳಿ ಮತ್ತು ೮ ಕಂಚಿನ ಪದಕಗಳೊಂದಿಗೆ ಅಗ್ರ ಸ್ಥಾನದಲ್ಲಿದ್ದರೆ, ಕರ್ನಾಟಕ ೧೭ ಚಿನ್ನ, ೯ ಬೆಳ್ಳಿ ಮತ್ತು ೯ ಕಂಚಿನ ಪದಕಗಳೊಂದಿಗೆ ೨ನೇ ಸ್ಥಾನದಲ್ಲಿದೆ.

***************

ವಿಧಾನ ಸೌಧದಲ್ಲಿ ಶಾಶ್ವತ ಲೈಟಿಂಗ್ ವ್ಯವಸ್ಥೆ ಮಾಡಲು ನಿರ್ಧರಿಸಲಾಗಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಧಾನ ಸೌಧದಲ್ಲಿ ಪ್ರಮುಖ ಸರಕಾರಿ ಹಾಗೂ ಹಬ್ಬಗಳ ಸಂದರ್ಭದಲ್ಲಿ ತಾತ್ಕಾಲಿಕ ಲೈಟಿಂಗ್ ವ್ಯವಸ್ಥೆ ಮಾಡಲಾಗುತ್ತಿದೆ. ಇದಕ್ಕೆ ಬದಲಾಗಿ ವಿಧಾನ ಸೌಧದಲ್ಲಿ ಶಾಶ್ವತ ಲೈಟಿಂಗ್ ವ್ಯವಸ್ಥೆ ಕಲ್ಪಿಸಿ, ಪ್ರತಿ ಶನಿವಾರ ಮತ್ತು ಭಾನುವಾರ ಹಾಗೂ ಇತರ ಪ್ರಮುಖ ದಿನಗಳ ಸಂದರ್ಭದಲ್ಲಿ ಬೆಳಕಿನ ವ್ಯವಸ್ಥೆಯ ನಿರ್ವಹಣೆ ವ್ಯವಸ್ಥೆಗೆ ಚರ್ಚಿಸಲಾಗಿದ್ದು, ಸರ್ಕಾರ ಒಪ್ಪಿಗೆ ಸೂಚಿಸಿದೆ. ಈ ಕುರಿತಂತೆ ಟೆಂಡರ್ ಕರೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಗದಗದ ಜಿಮ್ಸ್ ಆಸ್ಪತ್ರೆ, ಸೇವೆಯಲ್ಲಿ ಶ್ರೇಷ್ಠ ಆಸ್ಪತ್ರೆ ಆಗಲಿ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ತಿಳಿಸಿದ್ದಾರೆ. ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆ ಆವರಣದಲ್ಲಿ ನೂತನ ಕ್ಯಾಥಲ್ಯಾಬ್ ಸೌಲಭ್ಯದೊಂದಿಗೆ ಸೂಪರ್ ಸ್ಪೆಷಾಲಿಟಿ ಹೃದ್ರೋಗ ಚಿಕಿತ್ಸಾ ಘಟಕದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಜಿಮ್ಸ್ ಆರಂಭವಾಗಿ ೧೦ ವರ್ಷ ಪೂರ್ಣಗೊಳಿಸಿದೆ. ಇದೀಗ ೧೦ ಕೋಟಿ ವೆಚ್ಚದಲ್ಲಿ ಕ್ಯಾಥ್ ಲ್ಯಾಬ್ ಕಾರ್ಯಾರಂಭ ಮಾಡಿದ್ದು, ಬಡವರಿಗೆ ಹೆಚ್ಚು ಅನುಕೂಲ ಆಗಲಿದೆ ಎಂದು ಹೇಳಿದ್ದಾರೆ.

***************

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ರಾಜ್ಯದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದ್ದು, ಈ ಮೂಲಕ ಮಹಿಳೆಯರು ಸೇರಿದಂತೆ ಸಮಾಜದ ಎಲ್ಲಾ ವರ್ಗಗಳ ಜನರಿಗೆ ಶಕ್ತಿ ತುಂಬಲು ಸಹಕಾರಿಯಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಅಧ್ಯಕ್ಷ ಎಚ್.ಎಂ.ರೇವಣ್ಣ ತಿಳಿಸಿದ್ದಾರೆ.

*******ಮುಕ್ತಾಯ*******